# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 285
**ಮಾನ್ಯ ಸದಸ್ಯರ ಹೆಸರು** : ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 06.03.2025
**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕೇಂದ್ರ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ; | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಾಮಗಾರಿಯನ್ನು 2013-14ನೇ ಸಾಲಿನಲ್ಲಿ ರೂ.268.04 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪ್ರಾರಂಭಿಸಲಾಗಿತ್ತು. ತದನಂತರ, ಸದರಿ ಕಾಮಗಾರಿಯನ್ನು ಸರ್ಕಾರದ ಆದೇಶ ಸಂಖ್ಯೆ:ಟಿಓಆರ್ 84 ಟಿಡಿಪಿ 2020 ದಿನಾಂಕ:27-05-2020 ರ ಆದೇಶದನ್ವಯ ರೂ.330.45 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. |
| ಆ) | ಈ ಹೆರಿಟೇಜ್ ಕೇಂದ್ರದ ಕಾಮಗಾರಿಗೆ ಒಟ್ಟು ಮೀಸಲಿರಿಸಿದ ಅನುದಾನ ಎಷ್ಟು? | ಈ ಹೆರಿಟೇಜ್ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ:ಟಿಓಆರ್/84/ಟಿಡಿಪಿ/2020, ದಿನಾಂಕ:27-05-2020 ರನ್ವಯ ಮೀಸಲಿಟ್ಟ ಒಟ್ಟಾರೆ ರೂ.330.45 ಲಕ್ಷಗಳ ಅನುದಾನವನ್ನು ಆರು ಕಂತುಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ. |
| ಇ) | ಸದರಿ ಕಾಮಗಾರಿ ಯಾವ ಹಂತದಲ್ಲಿದೆ; ಕಾಮಗಾರಿ ವಿಳಂಬವಾಗಲು ಕಾರಣವೇನು; | ಸರ್ಕಾರದ ಪರಿಷ್ಕೃತ ಆದೇಶ ಸಂಖ್ಯೆ: ಟಿಓಆರ್/84/ಟಿಡಿಪಿ/2020, ದಿನಾಂಕ:27-05-2020 ರನ್ವಯ ರೂ.330.45 ಲಕ್ಷಗಳ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯನ್ವಯ ಅಂದಾಜು ಪಟ್ಟಿಯಲ್ಲಿರುವಂತೆ, 02 ಸಂಖ್ಯೆಯ ಐನ್ ಮನೆಗಳ ನಿರ್ಮಾಣ (ಅಡಿಗೆಮನೆ, ದೊಡ್ಡ ಹಾಲ್, ಲೈಬ್ರರಿ) ಬಯಲು ರಂಗಮಂದಿರ, ವಾಟರ್ ಟ್ಯಾಂಕ್ ಅಪ್ಪರ್ ಮತ್ತು ಲೋವರ್ ಡಿಸ್‌ಪ್ಲೇ ಭಾಗದ ತಡೆಗೋಡೆ ನಿರ್ಮಾಣ ಇತರೆ ಭಾಗಗಳಿಗೆ ಸಂಪರ್ಕ ಕಲ್ಪಿಸಲು ಮೆಟ್ಟಿಲು ನಿರ್ಮಾಣ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಪೂರ್ಣಗೊಳಿಸಲಾಗಿರುತ್ತದೆ. |
| ಈ) | ಕೊಡವ ಹೆರಿಟೇಜ್ ಕಾಮಗಾರಿಯನ್ನು ಪೂರ್ಣ ಪ್ರಮಾಣದಲ್ಲಿ ಪೂರ್ಣಗೊಳಿಸಲು ಅವಶ್ಯವಿರುವ 495.00 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆ ಸಹಮತಿ | ಕೊಡವ ಹೆರಿಟೇಜ್ ಸೆಂಟರ್ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡಲು ಆಗಬೇಕಾಗಿರುವ ಪೂರಕ ಕಾಮಗಾರಿಗಳಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನ ರೂ.495.00 ಲಕ್ಷಗಳನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡದೇ ಇರುವುದರಿಂದ ಸದರಿ ಕಾಮಗಾರಿಗಳನ್ನು |

| | | |
|---|---|---|
| | ನೀಡದೇ ಇರಲು ಕಾರಣವೇನು; | ಸಿಎಸ್‌ಆರ್ ಅನುದಾನದಡಿಯಲ್ಲಿ ಕೈಗೊಳ್ಳುವಂತೆ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ/ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಪ್ರಸ್ತುತ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಕೊಡಗು ಜಿಲ್ಲೆ, ಮಡಿಕೇರಿ ಇವರು ಸದರಿ ಕಾಮಗಾರಿಯನ್ನು ಸಿಎಸ್‌ಆರ್ ಅನುದಾನದಲ್ಲಿ ಕೈಗೊಂಡು ನಿರ್ವಹಣೆ ಮತ್ತು ಕಾರ್ಯಾಚರಣೆ ಮಾಡಲು ಕಷ್ಟಸಾಧ್ಯ/ ಕಾರ್ಯಸಾಧುವಲ್ಲದ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯನ್ನು ಪಿಪಿಪಿ (Public Private Partnership) ಮಾದರಿಯಲ್ಲಿ ಪೂರ್ಣಗೊಳಿಸಿ ನಿರ್ವಹಣೆ ಹಾಗೂ ಕಾರ್ಯಚರಣೆ ಮಾಡುವ ಬಗ್ಗೆ, ಮಾರ್ಗದರ್ಶನ ನೀಡಲು ಕೋರಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಇವರಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಮುಂದಿನ ಕ್ರಮವಹಿಸಲಾಗುವುದು. |
| ಉ) | ಹೆಚ್ಚುವರಿ ಅನುದಾನವನ್ನು ಶೀಘ್ರ ಬಿಡುಗಡೆಗೊಳಿಸಿ ಕಾಮಗಾರಿಯನ್ನು ಪೂರ್ಣಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಸಂಪೂರ್ಣ ವಿವರ ನೀಡುವುದು) | |

**ಸಂಖ್ಯೆ:ಟಿಒಆರ್ 27 ಟಿಡಿವಿ 2025**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು